# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 466 |
| 2 | ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 22-12-2022 |
| 4 | ಉತ್ತರಿಸುವವರು | : | ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರ ವ್ಯಾಪ್ತಿಯಲ್ಲಿ ರಸ್ತೆಗಳನ್ನು ಅಗೆದು ತಿಂಗಳುಗಳ ಕಾಲ ಹಾಗೆಯೇ ಬಿಟ್ಟಿರುವುದರಿಂದ ಅಪಘಾತಗಳು / ಸಾವುನೋವುಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬೆಂಗಳೂರು ನಗರದಲ್ಲಿ ರಸ್ತೆಯಲ್ಲಿನ ಗುಂಡಿಗಳಿಂದ ಅಪಘಾತವಾಗುತ್ತಿರುವ ಮತ್ತು ಸಾವುನೋವು ಸಂಭವಿಸುತ್ತಿರುವುದು ಅನೇಕ ಪತ್ರಿಕಾ ಮಾಧ್ಯಮ ಮತ್ತು ದೃಶ್ಯ ಮಾಧ್ಯಮಗಳಲ್ಲಿ ವರದಿಯಾಗಿರುವುದು ಕಂಡು ಬಂದಿರುತ್ತದೆ. |
| ಆ | ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವ ಕ್ರಮವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ರಸ್ತೆ ಗುಂಡಿಗಳನ್ನು ಮುಚ್ಚುವ ಸಂಬಂಧ ಬಿ.ಬಿ.ಎಂ.ಪಿ.ಯ ದಿನಾಂಕ:01-04-2022 ರಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br><br>1. ಬಿಬಿಎಂಪಿಯ ತನ್ನ ಏಕೈಕ ಸ್ವಂತ ಡಾಂಬರು ಮಿಶ್ರಣ ಘಟಕದೊಂದಿಗೆ ಇನ್ನೂ ನಾಲ್ಕು ಪ್ರದೇಶಗಳಲ್ಲಿ ಬಾಡಿಗೆ ರೂಪದಲ್ಲಿ ಡಾಂಬರು ಮಿಶ್ರಣ ಘಟಕವನ್ನು ಪಡೆಯಲಾಗಿದ್ದು, ಗುತ್ತಿಗೆದಾರರಿಗೆ ಈಗಾಗಲೇ ಗುಂಡಿ ಮುಚ್ಚುವ ಕಾರ್ಯಾದೇಶವನ್ನು ನೀಡಲಾಗಿದ್ದು, ರಸ್ತೆ ಗುಂಡಿ ಮುಚ್ಚುವ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>2. ಮಳೆಗಾಲದಲ್ಲಿ ಗುಂಡಿ ಮುಚ್ಚಲು ಅನುಕೂಲವಾಗುವಂತೆ Asphalt Cold Mix ತಯಾರಿಕ ತಂತ್ರಜ್ಞಾನದ ಬಿಡಿಭಾಗಗಳನ್ನು ಬಿಬಿಎಂಪಿಯ ಏಕೈಕ ಸ್ವಂತ ಡಾಂಬರು ಮಿಶ್ರಣ ಘಟಕಕ್ಕೆ ಜೋಡಣೆ ಮಾಡಲಾಗಿದ್ದು, ದಿನಾಂಕ:22-09-2022ರಂದು ಕಾರ್ಯಾದೇಶವನ್ನು ಮೆ॥ Infra Source Equipment & materials LLP, Mumbai ಸಂಸ್ಥೆಗೆ ನೀಡಲಾಗಿದ್ದು. ಸದರಿ ಸಂಸ್ಥೆಯು ಘಟಕದಿಂದ Asphalt Cold Mix ಮಿಶ್ರಣವನ್ನು ತಯಾರಿಸುವ ಕೆಲಸವು ಪ್ರಗತಿಯಲ್ಲಿರುತ್ತದೆ. |

.2...

| | | |
|---|---|---|
| | | 3. ಮಾನ್ಯ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿಯಲ್ಲಿ ಬೆಂಗಳೂರು ನಗರದ ಹಾಳಾದ ಮತ್ತು ಇತರೆ ನಿರ್ವಹಣೆಗೆ ಯೋಗ್ಯವಾದ ರಸ್ತೆಗಳನ್ನು ಡಾಂಬರೀಕರಣ ಮಾಡುವ ಕ್ರಮ ಕೈಗೊಳ್ಳಲಾಗಿದ್ದು, ವಾರ್ಡ್ ಮಟ್ಟದ ಹಾಗೂ ಆರ್ಟಿರಿಯಲ್ ಮತ್ತು ಸಬ್-ಆರ್ಟಿರಿಯಲ್ ರಸ್ತೆಗಳ ಮರು ಡಾಂಬರೀಕರಣ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದ್ದು, ವಿವರಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿರುತ್ತದೆ.<br><br>4. ವಾರ್ಡ್ ಮಟ್ಟದಲ್ಲಿ ಅಧ್ಯತೆಯ ಮೇಲೆ Liquid Emulsion Drum ಗಳನ್ನು ವಿತರಿಸಲಾಗಿದ್ದು, ತ್ವರಿತವಾಗಿ ಸ್ಥಳದಲ್ಲಿಯೇ ಡಾಂಬರು ಮಿಶ್ರಣ ತಯಾರಿಸಿ ಸೂಕ್ಷ್ಮ ಮತ್ತು ಅಫಘಾತ ಸರಹದ್ದುಗಳಲ್ಲಿ ರಸ್ತೆ ಗುಂಡಿ ಮುಚ್ಚಲು ಕ್ರಮಕೈಗೊಳ್ಳಲಾಗಿರುತ್ತದೆ.<br><br>ಈ ಮೇಲಿನ ಎಲ್ಲಾ ಕಾರ್ಯಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲಾಗುತ್ತಿದ್ದು, ಕನಿಷ್ಠ ಅವಧಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿರುತ್ತದೆ. |
| ಇ | ಇಂತಹ ಪ್ರಕರಣಗಳಲ್ಲಿ ಸಾವುನೋವು ಸಂಭವಿಸಿದಾಗ ಅಂತಹವರುಗಳಿಗೆ ಸರ್ಕಾರ (ಬಿಬಿಎಂಪಿ) ಪರಿಹಾರ ನೀಡಿದೆಯೇ ? (ವಿವರ ನೀಡುವುದು) | ಸರ್ಕಾರವು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ್ದು, ರಸ್ತೆ ಗುಂಡಿಗಳಿಂದ ವಾಹನ ಸವಾರರು ಪ್ರಾಣ ಕಳೆದುಕೊಂಡಿರುವ ದೂರಿನ ಪ್ರಕರಣಗಳು ತನಿಖಾ ಹಂತದಲಿದ್ದು, ಈ ಸಂಬಂಧ ಇಲ್ಲಿಯವರೆಗೂ ಯಾವುದೇ ಪರಿಹಾರ ವಿತರಣೆಯಾಗಿರುವುದಿಲ್ಲ. |

**ಸಂಖ್ಯೆ: ನಅಇ 928 ಎಂಎನ್‌ವೈ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ